# All India Radio: Bangalore
# National Bulletin In Kannada
# 01.12.2025  19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವಿಷಯದ ಚರ್ಚೆಗೆ ಆಗ್ರಹಿಸಿ ವಿರೋಧ ಪಕ್ಷಗಳ ಗದ್ದಲ; ಸಂಸತ್ತಿನ ಉಭಯ ಸದನಗಳ ಕಲಾಪ ನಾಳೆಗೆ ಮುಂದೂಡಿಕೆ

೨. ಸಂವಿಧಾನ ಎತ್ತಿಹಿಡಿಯುವಂತೆ ಸಂಸತ್ ಸದಸ್ಯರಿಗೆ ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಸಲಹೆ

೩. ತಿರುವನಂತಪುರದಲ್ಲಿ ನಾಳೆಯಿಂದ ಭಾರತ-ಮಾಲ್ದೀವ್ಸ್ ದ್ವಿಪಕ್ಷೀಯ ಸಮರಾಭ್ಯಾಸ

೪. ಮಹಿಳಾ ಹಾಕಿ ಜೂನಿಯರ್ ವಿಶ್ವಕಪ್; ಇಂದಿನ ಪಂದ್ಯದಲ್ಲಿ ಭಾರತ-ನಮೀಬಿಯಾ ಮುಖಾಮುಖಿ

***************

ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಸೇರಿದಂತೆ ವಿವಿಧ ವಿಷಯಗಳ ಬೇಡಿಕೆಯೊಂದಿಗೆ ವಿರೋಧ ಪಕ್ಷಗಳು ಘೋಷಣೆ ಕೂಗಿ, ಗದ್ದಲ ಉಂಟಾದ ಹಿನ್ನೆಲೆಯಲ್ಲಿ ಸಂಸತ್ತಿನ ಉಭಯ ಸದನಗಳನ್ನು ದಿನದ ಮಟ್ಟಿಗೆ ಮುಂದೂಡಲಾಗಿದೆ.

ಲೋಕಸಭೆಯಲ್ಲಿ ಎರಡನೇ ಮುಂದೂಡಿಕೆ ನಂತರ ಮಧ್ಯಾಹ್ನ ೨ ಗಂಟೆಗೆ ಸದನ ಸೇರಿದಾಗ, ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಮಣಿಪುರ ಸರಕು ಮತ್ತು ಸೇವಾ ತೆರಿಗೆ ಮಸೂದೆ ೨೦೨೫ ಅನ್ನು ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಮಂಡಿಸಿದರು. ಈ ಮಸೂದೆಯು ಮಣಿಪುರ ಸರಕು ಮತ್ತು ಸೇವಾ ತೆರಿಗೆ ಕಾಯ್ದೆ ೨೦೧೭ಕ್ಕೆ ತಿದ್ದುಪಡಿ ತರುವ ಗುರಿ ಹೊಂದಿದೆ. ವಿರೋಧ ಪಕ್ಷಗಳ ಗದ್ದಲದ ನಡುವೆ ಧ್ವನಿ ಮತದಿಂದ ಮಸೂದೆಯನ್ನು ಅಂಗೀಕರಿಸಲಾಯಿತು.

ಇದಕ್ಕೂ ಮುನ್ನ ಮೊದಲ ಮುಂದೂಡಿಕೆಯ ನಂತರ ಮಧ್ಯಾಹ್ನ ೧೨ ಗಂಟೆಗೆ ಸದನ ಸೇರಿದಾಗ, ವಿರೋಧ ಪಕ್ಷದ ಸದಸ್ಯರು ಮತದಾರ ಪಟ್ಟಿ ತೀವ್ರ ಪರಿಷ್ಕರಣೆ ವಿರೋಧಿಸಿ ಘೋಷಣೆ ಕೂಗಲು ಪ್ರಾರಂಭಿಸಿದರು ಮತ್ತು ಸದನದ ಬಾವಿಗಿಳಿದು ಪ್ರತಿಭಟಿಸಿದರು. ಎಸ್ಐಆರ್ ವಿಷಯದ ಕುರಿತು ಚರ್ಚೆಗೆ ಒತ್ತಾಯಿಸಿದರು. ಘೋಷಣೆಗಳ ನಡುವೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ತಂಬಾಕು ಮತ್ತು ಅದರ ಸಂಬಂಧಿತ ಉತ್ಪನ್ನಗಳ ಮೇಲೆ ಅಬಕಾರಿ ವಿಧಿಸಲು, ಕೇಂದ್ರ ಅಬಕಾರಿ ತಿದ್ದುಪಡಿ ಮಸೂದೆ ೨೦೨೫ ಅನ್ನು ಮಂಡಿಸಿದರು. ಪಾನ್ ಮಸಾಲದಂತಹ ನಿರ್ದಿಷ್ಟ ಸರಕುಗಳ ಉತ್ಪಾದನೆಯ ಮೇಲೆ ಸೆಸ್ ವಿಧಿಸಲು ಸಚಿವರು, ಆರೋಗ್ಯ ಭದ್ರತೆ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ ೨೦೨೫ ಅನ್ನು ಮಂಡಿಸಿದರು.
ಜನ ವಿಶ್ವಾಸ್ ನಿಬಂಧನೆಗಳ ತಿದ್ದುಪಡಿ ಮಸೂದೆ ೨೦೨೫ರ ಆಯ್ಕೆ ಸಮಿತಿಯ ವರದಿಯ ಮಂಡನೆಗೆ ಸದನವು ೨೦೨೫ರ ಚಳಿಗಾಲದ ಅಧಿವೇಶನದ ಎರಡನೇ ವಾರದ ಕೊನೆಯ ದಿನದವರೆಗೆ ಸಮಯವನ್ನು ವಿಸ್ತರಿಸಿತು.

ದಿವಾಳಿತನ ಸಂಹಿತೆ ತಿದ್ದುಪಡಿ ಮಸೂದೆ ೨೦೨೫ರ ಆಯ್ಕೆ ಸಮಿತಿಯ ವರದಿ ಮಂಡನೆಯನ್ನು ಲೋಕಸಭೆಯ ಅಧಿವೇಶನದ ಕೊನೆಯ ದಿನದವರೆಗೆ ವಿಸ್ತರಿಸಿತು. ರಾಜ್ಯಸಭೆಯಲ್ಲಿ ಇಂದು ಬೆಳಗ್ಗೆ ಸದನ ಸೇರಿದಾಗ ಗುರ್ವಿಂದರ್ ಸಿಂಗ್ ಒಬೆರಾಯ್, ಚೌಧರಿ ಮೊಹಮ್ಮದ್ ರಂಜಾನ್ ಮತ್ತು ಸಜ್ಜದ್ ಅಹಮ್ಮದ್ ಕಿಚ್ಲು, ಮೇಲ್ಮನೆಯ ಸದಸ್ಯರಾಗಿ ಪ್ರಮಾಣವಚನ ಸ್ವೀಕರಿಸಿದರು.

ಈ ವೇಳೆ, ಕಲಾಪ ಉದ್ದೇಶಿಸಿ ಮಾತನಾಡಿದ ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್, ಸಂಸತ್ ಸದಸ್ಯರು ಸಂವಿಧಾನವನ್ನು ಎತ್ತಿ ಹಿಡಿಯಬೇಕು ಮತ್ತು ಸ್ಥಾಪಿತ ಮಾನದಂಡಗಳನ್ನು ಅನುಸರಿಸಬೇಕು ಎಂದು ಒತ್ತಾಯಿಸಿದರು. ಮೇಲ್ಮನೆಯ ಸಭಾಪತಿಯಾಗಿ ಮೊದಲ ಬಾರಿಗೆ ಕಲಾಪ ನಡೆಸಿದ ಸಿ.ಪಿ.ರಾಧಾಕೃಷ್ಣನ್, ಜನರ ಆಕಾಂಕ್ಷೆಗಳನ್ನು ಪೂರೈಸಲು ಬದ್ಧತೆಯಿಂದ ಕೆಲಸ ಮಾಡುವುದು ಸಂಸದರ ಕರ್ತವ್ಯವಾಗಿದೆ ಎಂದು ಹೇಳಿದರು.

ಇದಕ್ಕೂ ಮುನ್ನ, ರಾಜ್ಯಸಭಾ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಸ್ವಾಗತಿಸಿದರು. ಈ ವೇಳೆ ಮಾತನಾಡಿದ ಪ್ರಧಾನಿ, ರಾಧಾಕೃಷ್ಣನ್ ಅವರು ಸಾಮಾನ್ಯ ಹಿನ್ನೆಲೆಯಿಂದ ಉಪರಾಷ್ಟ್ರಪತಿ ಸ್ಥಾನಕ್ಕೆ ಏರಿದ್ದು, ದೇಶದ ಪ್ರಜಾಪ್ರಭುತ್ವದ ನಿಜವಾದ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ. ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ರಾಧಾಕೃಷ್ಣನ್ ಅವರು ಪ್ರಜಾಪ್ರಭುತ್ವದ ನಿಜವಾದ ರಕ್ಷಕರಂತೆ ಹೋರಾಡಿದ್ದರು ಎಂದು ಸ್ಮರಿಸಿದರು.

***************

ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿಯಲ್ಲಿ ಇದುವರೆಗೆ ೨ ಕೋಟಿ ೭೨ ಲಕ್ಷ ಕುಶಲಕರ್ಮಿಗಳು ದಾಖಲಾಗಿದ್ದಾರೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಕುಶಲಕರ್ಮಿಗಳಿಗೆ ಸಂಪೂರ್ಣ ಬೆಂಬಲ ಒದಗಿಸಲು ೨೦೨೩ರಲ್ಲಿ ಈ ಯೋಜನೆಯನ್ನು ಪ್ರಾರಂಭಿಸಲಾಯಿತು. ಇದುವರೆಗೆ ೨೩ ಲಕ್ಷಕ್ಕೂ ಹೆಚ್ಚು ಫಲಾನುಭವಿಗಳಿಗೆ ಕೌಶಲ್ಯ ತರಬೇತಿ ನೀಡಲಾಗಿದೆ. ಅಲ್ಲದೇ, ೭ ಲಕ್ಷ ಫಲಾನುಭವಿಗಳಿಗೆ ೨೩ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೊತ್ತದ ಪ್ರೋತ್ಸಾಹಧನ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

***************

೨೦೧೪ ರಿಂದ ದೇಶದಲ್ಲಿ ಕಾರ್ಯನಿರ್ವಹಿಸುತ್ತಿದ್ದ ೧೨ ನಕಲಿ ವಿಶ್ವವಿದ್ಯಾಲಯಗಳನ್ನು ಮುಚ್ಚಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

ಲೋಕಸಭೆಯಲ್ಲಿ ಪ್ರಶ್ನೊಯೊಂದಕ್ಕೆ ಲಿಖಿತ ಉತ್ತರ ನೀಡಿದ ಕೇಂದ್ರ ಶಿಕ್ಷಣ ಖಾತೆ ರಾಜ್ಯ ಸಚಿವ ಡಾ.ಸುಕಾಂತ ಮಜುಂದಾರ್, ದೇಶದಲ್ಲಿ ಪ್ರಸ್ತುತ ೨೪ ನಕಲಿ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ಸಂಸ್ಥೆಗಳನ್ನು ಮುಚ್ಚುವ ನಿಟ್ಟಿನಲ್ಲಿ ಕಾನೂನು ಕ್ರಮ ಕೈಗೊಳ್ಳಲು ಮತ್ತು ಸೂಕ್ತ ಕ್ರಮಕ್ಕಾಗಿ ಕೇಂದ್ರ ಮತ್ತು ವಿಶ್ವ ವಿದ್ಯಾಲಯ ಧನಸಹಾಯ ಆಯೋಗ-ಯುಜಿಸಿ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಅನೇಕ ಸ್ವಯಂ ಘೋಷಿತ ಸಂಸ್ಥೆಗಳು ಮತ್ತು ವಿಶ್ವವಿದ್ಯಾಲಯಗಳ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಅಮಾನ್ಯ ಪದವಿಗಳನ್ನು ನೀಡುವ ಅನಧಿಕೃತ ಸಂಸ್ಥೆಗಳಿಗೆ ಶೋಕಾಸ್ ನೋಟಿಸ್ ಮತ್ತು ಎಚ್ಚರಿಕೆಗಳನ್ನು ಸಹ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

***************

ಇ-ಶ್ರಮ್ ಪೋರ್ಟಲ್‌ನಲ್ಲಿ ಇದುವರೆಗು ೩೧ ಕೋಟಿಗೂ ಹೆಚ್ಚು ಅಸಂಘಟಿತ ಕಾರ್ಮಿಕರು ಮತ್ತು ೫ ಲಕ್ಷಕ್ಕೂ ಹೆಚ್ಚು ಗಿಗ್ ಕಾರ್ಮಿಕರು ನೋಂದಾಯಿಸಿಕೊಂಡಿದ್ದಾರೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಪ್ರಶ್ನೊಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಅಸಂಘಟಿತ ಮತ್ತು ಗಿಗ್ ಕಾರ್ಮಿಕರಿಗೆ ಸಾರ್ವತ್ರಿಕ ಖಾತೆ ಸಂಖ್ಯೆಯನ್ನು ಒದಗಿಸುವ ಮೂಲಕ ನೋಂದಾಯಿಸಲು ೨೦೨೧ರಲ್ಲಿ ಇ-ಶ್ರಮ್ ಪೋರ್ಟಲ್ ಅನ್ನು ಪ್ರಾರಂಭಿಸಲಾಯಿತು. ಸಾಮಾಜಿಕ ಭದ್ರತೆ, ಆರೋಗ್ಯ ಸೌಲಭ್ಯ ಮತ್ತು ಕಲ್ಯಾಣ ಯೋಜನೆಗಳಿಗೆ ಪ್ರವೇಶವನ್ನು ಒದಗಿಸಲು ವಿವಿಧ ಕೇಂದ್ರ ಸಚಿವಾಲಯವು ಮತ್ತು ಇಲಾಖೆಗಳ ೧೪ ಯೋಜನೆಗಳನ್ನು ಈಗಾಗಲೇ ಇ-ಶ್ರಮ್ ಪೋರ್ಟಲ್‌ನೊಂದಿಗೆ ಸಂಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

***************

ಭಾರತ-ಮಾಲ್ದೀವ್ಸ್ ದ್ವಿಪಕ್ಷೀಯ ಸಮರಾಭ್ಯಾಸ-ಎಕುವೆರಿನ್ ನ ೧೪ನೇ ಆವೃತ್ತಿಯು ಕೇರಳದ ತಿರುವನಂತಪುರದಲ್ಲಿ ನಾಳೆಯಿಂದ ಈ ತಿಂಗಳ ೧೫ರವರೆಗೆ ನಡೆಯಲಿದೆ. ಭಾರತೀಯ ಸೇನೆ ಮತ್ತು ಮಾಲ್ದೀವ್ಸ್ ರಾಷ್ಟ್ರೀಯ ರಕ್ಷಣಾ ಪಡೆಗಳ ನಡುವೆ ಈ ಸಮಾರಾಭ್ಯಾಸ ನಡೆಯಲಿದೆ. ನಗರ ಕಾಡು ಮತ್ತು ಕರಾವಳಿ ಪ್ರದೇಶಗಳಲ್ಲಿ ದಂಗೆ ನಿಗ್ರಹ ಮತ್ತು ಭಯೋತ್ಪಾದನಾ ಕಾರ್ಯಚರಣೆಗಳನ್ನು ನಡೆಸುವಾಗ ಪರಸ್ಪರ ಕಾರ್ಯ ಸಾಧ್ಯತೆಯನ್ನು ಹೆಚ್ಚಿಸುವ ಗುರಿಯನ್ನು ಈ ಸಮರಾಭ್ಯಾಸ ಹೊಂದಿದೆ ಎಂದು ಭಾರತೀಯ ಸೇನೆ ತಿಳಿಸಿದೆ. ಈ ಸಮಾರಾಭ್ಯಾಸವು ಈ ಪ್ರದೇಶದಲ್ಲಿ ಶಾಂತಿ ಮತ್ತು ಸುರಕ್ಷತೆಯ ಕಡೆಗೆ ಭಾರತ ಮತ್ತು ಮಾಲ್ದೀವ್ಸ್‌ನ ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

***************

ಚಿಲಿಯ ಸ್ಯಾಂಟಿಯಾಗೊದಲ್ಲಿ ಇಂದಿನಿಂದ ಆರಂಭವಾಗುವ ಮಹಿಳಾ ಎಫ್‌ಐಎಚ್ ಹಾಕಿ ಜೂನಿಯರ್ ವಿಶ್ವಕಪ್ ಪಂದ್ಯಾವಳಿಯಲ್ಲಿ ಭಾರತ ತಂಡ, ನಮೀಬಿಯಾ ವಿರುದ್ಧ ಅಭಿಯಾನ ಆರಂಭಿಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೭:೪೫ಕ್ಕೆ ಪ್ರಾರಂಭವಾಗಲಿದೆ.

***************

ಬಿಎಸ್‌ಎಫ್ ಸಂಸ್ಥಾಪನಾ ದಿನವಾದ ಇಂದು ಪ್ರಧಾನಿ ನರೇಂದ್ರ ಮೋದಿ ಅವರು ಗಡಿ ಭದ್ರತಾ ಪಡೆಯ ಎಲ್ಲಾ ಸಿಬ್ಬಂದಿಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ, ಬಿಎಸ್‌ಎಫ್-ಭಾರತದ ಅಚಲವಾದ ಸಂಕಲ್ಪ ಮತ್ತು ಅತ್ಯಂತ ವೃತ್ತಿಪರತೆಯನ್ನು ಸಂಕೇತಿಸುತ್ತದೆ. ಸಂಪೂರ್ಣ ಸಮರ್ಪಣ ಭಾವದಿಂದ ಬಿಎಸ್‌ಎಫ್ ಸೇವೆ ಸಲ್ಲಿಸುತ್ತಿದೆ ಮತ್ತು ಅತ್ಯಂತ ಕಠಿಣ ಭೂಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಇದೇ ವೇಳೆ ಬಿಎಸ್‌ಎಫ್ ಸಿಬ್ಬಂದಿಯ ಮನೋಭಾವವನ್ನು ಪ್ರಧಾನಿ ಅವರು ಶ್ಲಾಘಿಸಿದ್ದಾರೆ.

***************

ದೇಶಾದ್ಯಂತ ಇಂದು ಗೀತಾ ಜಯಂತಿಯನ್ನು ಆಚರಿಸಲಾಯಿತು. ಐದು ಸಾವಿರ ವರ್ಷಗಳ ಹಿಂದೆ ಕುರುಕ್ಷೇತ್ರದ ಯುದ್ಧಭೂಮಿಯಲ್ಲಿ ಶ್ರೀಕೃಷ್ಣನು ಅರ್ಜುನನಿಗೆ ಭಗವದ್ಗೀತೆಯ ಕಾಲಾತೀತ ಬೋಧನೆಗಳನ್ನು ನೀಡಿದ ಕ್ಷಣವನ್ನು ಈ ದಿನ ಸ್ಮರಿಸಲಾಗುತ್ತದೆ. ಗೀತಾ ಜಯಂತಿ ಕೇವಲ ಧಾರ್ಮಿಕ ಆಚರಣೆಯ ದಿನವಾಗಿರದೇ, ಶ್ರೀಕೃಷ್ಣನು ನೀಡಿದ ಸಾರ್ವತ್ರಿಕ ಜ್ಞಾನವನ್ನು ಸ್ಮರಿಸುವ ದಿನವಾಗಿದೆ. ಆ ಜ್ಞಾನ ಲಕ್ಷಾಂತರ ಜನರಿಗೆ ಅವರ ಆಧ್ಯಾತ್ಮಿಕ ಮತ್ತು ದೈನಂದಿನ ಜೀವನದಲ್ಲಿ ಮಾರ್ಗದರ್ಶನ ನೀಡುತ್ತಲೇ ಇದೆ. ಜೀವನ, ಕರ್ತವ್ಯ ಮತ್ತು ಅಸ್ತಿತ್ವದ ಸ್ವರೂಪದ ಬಗ್ಗೆ ಅತ್ಯಂತ ಮೂಲಭೂತ ಪ್ರಶ್ನೆಗಳಿಗೆ ಪರಿಹಾರಗಳನ್ನು ಒದಗಿಸುತ್ತದೆ.

***************

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೬೫ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೫ ಸಾವಿರ ೬೪೨ ಅಂಕಗಳು ದಾಖಲಾಗಿದೆ. ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೨೭ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೬ ಸಾವಿರದ ೧೮೬ ಅಂಕಗಳು ದಾಖಲಾಗಿದೆ.

*******ಮುಕ್ತಾಯ********